**Bangalore**
**Regional News**
**21.04.2026 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆಗೆ ಗ್ರೇಡ್ ಬದಲು ಅಂಕ ನೀಡುವಂತೆ ಉಚ್ಚ ನ್ಯಾಯಾಲಯ ಆದೇಶ

೨. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆಯಲ್ಲಿ ೧೧೦ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ

೩. ಮಂಗಳೂರು ನಗರ ಪೊಲೀಸ್ ಆಯುಕ್ತರ ವಿರುದ್ಧ ಕಿರುಕುಳ ಆರೋಪ- ವರದಿ ನೀಡುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚನೆ

೪. ಬಿಟ್ ಕಾಯಿನ್ ಪ್ರಕರಣ; ಬೆಂಗಳೂರಿನಲ್ಲಿ ಶೋಧಕಾರ್ಯ ಅಂತ್ಯಗೊಳಿಸಿದ ಇಡಿ ಅಧಿಕಾರಿಗಳು

೫. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ೧೭ನೇ ಘಟಿಕೋತ್ಸವ; ರಾಜ್ಯಪಾಲರಿಂದ ಮೂವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ

**<><*<><>*><>**

ಹಿಂದಿ ಸೇರಿದಂತೆ ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆಗೆ ಈ ವರ್ಷ ಅಂಕವನ್ನೇ ನೀಡುವಂತೆ ಸರ್ಕಾರಕ್ಕೆ ಉಚ್ಚ ನ್ಯಾಯಾಲಯ ಆದೇಶ ನೀಡಿದೆ. ತೃತೀಯ ಭಾಷೆಗೆ ಅಂಕದ ಬದಲು ಗ್ರೇಡ್ ನೀಡುವ ಸಂಬಂಧ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರಿದ್ದ ಪೀಠ, ಈ ವರ್ಷ ಹಳೆಯ ಪದ್ಧತಿಯನ್ನೇ ಮುಂದುವರಿಸುವಂತೆ ಸೂಚನೆ ನೀಡಿದೆ. ನ್ಯಾಯಾಲಯದ ಈ ಆದೇಶದಿಂದ ಸರ್ಕಾರದ ಆದೇಶಕ್ಕೆ ಹಿನ್ನಡೆಯಾಗಿದ್ದು, ವಿಭಾಗೀಯ ಪೀಠದಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಂಡಿದೆ. ಸರ್ಕಾರದ ಪರ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ವಾದ ಮಂಡಿಸಿದ್ದು, ಹಿಂದಿ ಭಾಷೆಯಲ್ಲಿ ಲಕ್ಷಕ್ಕೂ ಹೆಚ್ಚು ಮಂದಿ ಅನುತ್ತೀರ್ಣಗೊಂಡಿದ್ದು, ವಿದ್ಯಾರ್ಥಿಗಳ ಮೇಲಿನ ಒತ್ತಡ ಕಡಿಮೆ ಮಾಡಲು ಸೂಕ್ತ ತಿದ್ದುಪಡಿಯೊಂದಿಗೆ ನಿಯಮ ರಚಿಸಲು ಸರ್ಕಾರ ಕರಡು ರೂಪಿಸುತ್ತಿದೆ. ಹೀಗಾಗಿ ಅಂಕದ ಬದಲು ಗ್ರೇಡ್ ನೀಡಲಾಗುತ್ತಿದೆ ಎಂದು

ವಾದಿಸಿದ್ದರು. ನ್ಯಾಯಾಲಯದ ಈ ಆದೇಶದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಎಲ್ಲಾ ತೃತೀಯ ಭಾಷೆಗೂ ಅಂಕಗಳು ಅನ್ವಯವಾಗಲಿದೆ.

<><*<><>*><>

ಎಸ್‌ಎಸ್‌ಎಲ್‌ಸಿಯಲ್ಲಿ ತೃತೀಯ ಭಾಷೆಗೆ ಅಂಕ ನೀಡುವ ಕುರಿತಂತೆ ಉಚ್ಚ ನ್ಯಾಯಾಲಯ ನಿರ್ದೇಶನ ನೀಡಿದ್ದು, ನ್ಯಾಯಾಲಯದ ಆದೇಶವನ್ನು ಪಾಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡರು ಹಾಗೂ ಕಾಂಗ್ರೆಸ್ ಪಕ್ಷದವರ ಮೇಲೆ ಮಾತ್ರ ಜಾರಿ ನಿರ್ದೇಶನಾಯಲದ ಅಧಿಕಾರಿಗಳು ದಾಳಿ ನಡೆಸುತ್ತಿದ್ದಾರೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕ್ಷೇತ್ರ ಮರುವಿಂಗಡಣೆಗೆ ವಿರೋಧವೇ ಹೊರತು, ನಾರಿ ಶಕ್ತಿ ವಂದನ್ ಕಾಯ್ದೆಗೆ ಕಾಂಗ್ರೆಸ್ ವಿರೋಧವಿಲ್ಲ ಎಂದು ತಿಳಿಸಿದ್ದಾರೆ.

<><*<><>*><>

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ೧೧೦ ಕೆರೆಗಳಿಗೆ ನೀರು ತುಂಬುವ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಶಂಕುಸ್ಥಾಪನೆ ನೆರವೇರಿಸಿದರು. ಗುಂಡ್ಲುಪೇಟೆ ಪಟ್ಟಣದ ಡಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ, ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯನ್ನು ಲೋಕಾರ್ಪಣೆಗೊಳಿಸಿದರು. ಕೋವಿಡ್ ಎರಡನೇ ಅವಧಿಯಲ್ಲಿ ಆಮ್ಲಜನಕ ಕೊರತೆಯಿಂದ ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಅಸುನೀಗಿದ್ದ ೨೪ ಮೃತರ ಕುಟುಂಬಕ್ಕೆ ಖಾಯಂ ಉದ್ಯೋಗ ನೇಮಕಾತಿ ಆದೇಶ ಪತ್ರವನ್ನು ಇದೇ ವೇಳೆ ವಿತರಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಡಾ.ಎಚ್.ಸಿ.ಮಹಾದೇವಪ್ಪ, ಸಂಸದ ಸುನೀಲ್ ಬೋಸ್ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎಚ್.ಎಂ.ಗಣೇಶ್ ಪ್ರಸಾದ್, ಎ.ಆರ್.ಕೃಷ್ಣಮೂರ್ತಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಡಿಸಿಆರ್‌ಇ ಇನ್‌ಸ್ಪೆಕ್ಟರ್‌ಗೆ ಮೇಲಾಧಿಕಾರಿಗಳ ಕಿರುಕುಳ ಆರೋಪ ಮತ್ತು ಮಂಗಳೂರು ನಗರ ಪೊಲೀಸ್ ಕಮಿಷನರ್ ವಿರುದ್ಧ ಡಿಜಿಪಿಗೆ ಪೊಲೀಸ್ ವರಿಷ್ಠಾಧಿಕಾರಿ ಪತ್ರ ಬರೆದಿರುವ ಕುರಿತು ವರದಿ ನೀಡುವಂತೆ ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಧ್ಯಮಗಳಲ್ಲಿ ವರದಿ

ಅಗಿರುವುದನ್ನು ಗಮನಿಸಿದ್ದು, ಡಿಸಿಆರ್‌ಇ ಇನ್‌ಸ್ಪೆಕ್ಟರ್ ಶ್ರೀನಿವಾಸ್ ಸಾಕಷ್ಟು ಆರೋಪಗಳನ್ನು ಮಾಡಿದ್ದಾರೆ. ಪೊಲೀಸ್ ವರಿಷ್ಠಾಧಿಕಾರಿ ಕಾಶಿನಾಥ್ ಪತ್ರವನ್ನು ಬರೆದಿದ್ದಾರೆ. ಈ ಎರಡು ಪ್ರಕರಣಗಳ ಕುರಿತು ಪೊಲೀಸ್ ಮಹಾನಿರ್ದೇಶಕರಿಂದ ವರದಿ ಕೇಳಲಾಗಿದೆ. ವರದಿ ಬಳಿಕ ಸತ್ಯಾಸತ್ಯತೆ ಆಧರಿಸಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಬಿಟ್‌ಕಾಯಿನ್ ಹಗರಣದ ಕುರಿತಂತೆ ಎಸ್‌ಐಟಿ ರಚನೆ ಮಾಡಲಾಗಿದ್ದು, ತನಿಖೆ ಕೊನೆ ಹಂತದಲ್ಲಿದೆ. ತಾಂತ್ರಿಕವಾಗಿ ಮಾಹಿತಿ ಕಲೆ ಹಾಕಲು ವಿಳಂಬವಾಗುತ್ತಿದೆ ಎಂದು ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

<><*<><>*><>

ಬಿಟ್ ಕಾಯಿನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ರಾಜ್ಯದ ಹಲವೆಡೆ ೨೧ ಗಂಟೆಗಳ ಕಾಲ ಶೋಧ ನಡೆಸಿ, ತನ್ನ ದಾಳಿಯನ್ನು ಅಂತ್ಯಗೊಳಿಸಿದೆ. ಕಾಂಗ್ರೆಸ್ ಶಾಸಕ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಎ.ಹ್ಯಾರಿಸ್ ಮತ್ತು ಅವರ ಪುತ್ರ ಮೊಹಮ್ಮದ್ ನಲಪಾಡ್ ಅವರ ನಿವಾಸಗಳಲ್ಲಿ ಇಂದು ಬೆಳಗಿನ ಜಾವ ೩ ಗಂಟೆಗೆ ೧೦೦ಕ್ಕೂ ಹೆಚ್ಚು ಅಧಿಕಾರಿಗಳು ಪರಿಶೀಲನೆ ಮುಗಿಸಿ, ತೆರಳಿದ್ದಾರೆ. ಕೇಂದ್ರದ ಮಾಜಿ ಸಚಿವ ಕೆ.ರೆಹಮಾನ್ ಖಾನ್ ಅವರ ಮೊಮ್ಮಗ ಅಕೀಬ್ ಖಾನ್ ಅವರ ನಿವಾಸದಲ್ಲಿಯೂ ಇಡಿ ಅಧಿಕಾರಿಗಳು ಶೋಧಕಾರ್ಯ ಮುಗಿಸಿದ್ದಾರೆ. ಆದರೆ, ಬಿಟ್‌ಕಾಯಿನ್ ಹಗರಣದ ಪ್ರಮುಖ ಆರೋಪಿ ಶ್ರೀಕಿ ನಿವಾಸದಲ್ಲಿ ಇಡಿ ತನಿಖೆ ಮುಂದುವರಿದಿದೆ.

<><*<><>*><>

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ೧೭ನೇ ಘಟಿಕೋತ್ಸವ ವಿಜಯಪುರದಲ್ಲಿ ಇಂದು ನಡೆಯಿತು. ಮುಖ್ಯ ಅತಿಥಿಗಳಾಗಿ ಮುಂಬೈನ ಎಸ್‌ಎನ್‌ಡಿಟಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಉಜ್ವಲಾ ಚಕ್ರದೇವ್ ಭಾಗವಹಿಸಿ ಘಟಿಕೋತ್ಸವ ಭಾಷಣ ಮಾಡಿದರು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಮೂವರು ಸಾಧಕರಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು. ಮಹಿಳಾ ವಿಶ್ವವಿದ್ಯಾಲಯದಿಂದ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ಗರಿಷ್ಠ ಅಂಕಗಳನ್ನು ಗಳಿಸಿ ತೇರ್ಗಡೆಯಾದ  ೭೦ ವಿದ್ಯಾರ್ಥಿನಿಯರಿಗೆ ೫೮ ಚಿನ್ನದ ಪದಕ ಮತ್ತು ೧೨ ನಗದು ಪಾರಿತೋಷಕ ಪದಕಗಳನ್ನು ಪ್ರದಾನ ಮಾಡಲಾಯಿತು. ೧ ಸಾವಿರದ ೧೧೬ ವಿದ್ಯಾರ್ಥಿನಿಯರಿಗೆ ವಿವಿಧ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ನೀಡಲಾಯಿತು.

<><*<><>*><>

ರಾಜ್ಯ ಸಾರಿಗೆ ನೌಕರರು ಇಂದಿನಿಂದ ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಿದ್ದು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಕಠಿಣ ನಿಲುವು ಕೈಬಿಟ್ಟು, ಸಾರಿಗೆ ನೌಕರರೊಂದಿಗೆ ತಕ್ಷಣ ಮಾತುಕತೆ ಆರಂಭಿಸುವಂತೆ ಸಲಹೆ ನೀಡಿದ್ದಾರೆ. ಇದೇ ವೇಳೆ, ರಾಜ್ಯದಲ್ಲಿ ವಿದ್ಯುತ್ ದರ ಏರಿಕೆಯನ್ನು ಖಂಡಿಸಿರುವ ಅವರು, ನಾಗರಿಕರ ಮೇಲೆ ಸರ್ಕಾರ ಹೊರೆ ಹೆಚ್ಚಿಸಿದೆ ಎಂದು ದೂರಿದ್ದಾರೆ. ಸಾರಿಗೆ ಸೇವೆಯಲ್ಲಿ ಯಾವುದೇ ಅಡಚಣೆ ಉಂಟಾದರೆ, ವಿದ್ಯಾರ್ಥಿಗಳು, ಉದ್ಯೋಗಿಗಳ ಮೇಲೆ ತೀವ್ರ ಪರಿಣಾಮ ಬೀಳಲಿದ್ದು, ಸರ್ಕಾರವೇ ಜವಾಬ್ದಾರಿಯಾಗಿರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ ಸಹಯೋಗದಲ್ಲಿ ಕೋಲಾರದ ಕೃಷಿ ವಿಜ್ಞಾನ ಕೇಂದ್ರದಲ್ಲಿ ನಾಳೆ ಮಾವು ಬೆಳೆಗಾರರಿಗೆ ರಫ್ತು ವಿಧಾನಗಳು ಮತ್ತು ಮಾರುಕಟ್ಟೆ ಅವಕಾಶಗಳ ಕುರಿತು ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಮಾವು ರಫ್ತು ವಿಧಾನಗಳು, ಗುಣಮಟ್ಟದ ಮಾನದಂಡಗಳು, ಪ್ಯಾಕಿಂಗ್, ಸಂಸ್ಕರಣೆ ಹಾಗೂ ಮಾರುಕಟ್ಟೆ ಸಂಪರ್ಕ ಕುರಿತು ಮಾಹಿತಿ ನೀಡಲಾಗುತ್ತದೆ. ಮಾವು ಬೆಳೆಗಾರರು, ವ್ಯಾಪಾರಿಗಳು, ರೈತ ಉತ್ಪಾದಕ ಸಂಘಗಳ ಸದಸ್ಯರು ಹಾಗೂ ಸಂಬಂಧಿತ ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರಯೋಜನ ಪಡೆಯುವಂತೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಶಿವಾನಂದ ಹೊಂಗಲ್ ತಿಳಿಸಿದ್ದಾರೆ.

<><*<><>*><>

ರಾಜ್ಯದೆಲ್ಲೆಡೆ ಇಂದು ಅದ್ವೈತ ಸಿದ್ದಾಂತ ಪ್ರತಿಪಾದಕ ಆದಿ ಶಂಕರಾಚಾರ್ಯರ ಜಯಂತಿ ಆಚರಿಸಲಾಗುತ್ತಿದೆ. ಶಂಕರಚಾರ್ಯರು ಸ್ಥಾಪಿಸಿದ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿಯಲ್ಲಿ ಇಂದು ಹಲವು ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಗದ್ಗುರುಗಳಾದ ಭಾರತಿತೀರ್ಥ ಸ್ವಾಮೀಜಿ, ವಿಧುಶೇಖರ ತೀರ್ಥ ಸ್ವಾಮೀಜಿ ನೇತೃತ್ವದಲ್ಲಿ ಶಾರದಾ ಪೀಠದಲ್ಲಿ ಇಂದು ಶಾರದೆ ಹಾಗೂ ಶಂಕರಾಚಾರ್ಯರಿಗೆ ವಿಶೇಷ ಪೂಜಾ ಕಾರ್ಯಕ್ರಮ ನೆರವೇರಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಆಚರಿಸಲಾಯಿತು. ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರು ನೀಡಿರುವ ತತ್ವ ಆದರ್ಶಗಳನ್ನು ಹಾಗೂ ಆಧ್ಯಾತ್ಮಿಕ ಚಿಂತನೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು

ವಿಜಯನಗರದಲ್ಲಿ ಧಾರ್ಮಿಕ ಮುಖಂಡ ಕೆ ವೆಂಕಟೇಶಮೂರ್ತಿ ಕರೆ ನೀಡಿದ್ದಾರೆ. ಇನ್ನೊಂದೆಡೆ ಬಳ್ಳಾರಿಯಲ್ಲಿ ಜಿಲ್ಲಾಡಳಿತದ ವತಿಯಿಂದ ಶಂಕರಚಾರ್ಯರ ಜಯಂತಿ ಆಚರಿಸಲಾಯಿತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>